ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

7

ಶಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE: 27/6/2020

# ಅಪಾಯದಲ್ಲಿ 63.85 ಲಕ್ಷ ಜನ

## ರಾಜ್ಯದಲ್ಲಿ ನಡೆಸಿದ ಮನೆ–ಮನೆ ಸಮೀಕ್ಷೆಯಿಂದ ಬಹಿರಂಗ

• ವರುಣ ಹೆಗಡೆ 27-6-20

**15.91** ಲಕ್ಷ
ಕಾಯಿಲೆಗಳಿಂದ ಅಸ್ವಸ್ಥಗೊಂಡಿರುವ ವೃದ್ಧರು

**60.88** ಲಕ್ಷ
ಹಿರಿಯ ನಾಗರಿಕರು

**4.88** ಲಕ್ಷ
ಗರ್ಭಿಣಿಯರು ಹಾಗೂ ಬಾಣಂತಿಯರು

**1.78** ಲಕ್ಷ
ಶೀತ, ಜ್ವರ, ಕೆಮ್ಮಿನಿಂದ ಬಳಲುತ್ತಿರುವವರು

**21,391**
ಐಎಲ್‌ಐ, ಸೋಂಕು ಲಕ್ಷಣ ಹೊಂದಿರುವವರು

ಬೆಂಗಳೂರು: ಕೊರೊನಾ ಸೋಂಕಿತರ ಸಂಖ್ಯೆ ಹೆಚ್ಚಳವಾಗುತ್ತಿರುವ ಹಿನ್ನೆಲೆಯಲ್ಲಿ ಮನೆ-ಮನೆ ಸಮೀಕ್ಷೆ ನಡೆಸಲಾಗುತ್ತಿದ್ದು, ರಾಜ್ಯದ 63.85 ಲಕ್ಷ ಜನರು ಅಪಾಯಕ್ಕೆ ತುತ್ತಾಗುವ ವರ್ಗಕ್ಕೆ ಸೇರಿದ್ದಾರೆ ಎಂದು ಗುರುತಿಸಲಾಗಿದೆ.

ಅಂಗನವಾಡಿ, ಆಶಾ ಹಾಗೂ ಆರೋಗ್ಯ ಕಾರ್ಯಕರ್ತೆಯರು ಜನರ ಆರೋಗ್ಯದ ಸ್ಥಿತಿಗತಿಯ ಬಗ್ಗೆ ಮಾಹಿತಿ ಕಲೆ ಹಾಕುತ್ತಿದ್ದಾರೆ. ಸೋಂಕು ಲಕ್ಷಣ ಕಾಣಿಸಿಕೊಂಡವರನ್ನು ಫೀವರ್ ಕ್ಲಿನಿಕ್‌ಗಳಿಗೆ ಕಳುಹಿಸಿ, ತಪಾಸಣೆಗೆ ಒಳಪಡಿಸಲಾಗುತ್ತಿದೆ. ಸೋಂಕು ದೃಢಪಟ್ಟಲ್ಲಿ ನೇರವಾಗಿ ಕೋವಿಡ್ ಆಸ್ಪತ್ರೆಗೆ ದಾಖಲಿಸಿಕೊಳ್ಳಲಾಗುತ್ತಿದೆ.

ಸಮುದಾಯದ ಹಂತಕ್ಕೆ ಸೋಂಕು ಹರಡುವುದನ್ನು ತಡೆಯುವ ಉದ್ದೇಶದಿಂದ ಈ ಸಮೀಕ್ಷೆ ನಡೆಸಲಾಗುತ್ತಿದ್ದು, ರಾಜ್ಯದಲ್ಲಿ ಶೇ 91.23ರಷ್ಟು (ಜೂ.23) ಮನೆಗಳ ಸಮೀಕ್ಷೆ ನಡೆದಿದೆ.

ಹಾಸನ, ಉತ್ತರ ಕನ್ನಡ, ವಿಜಯಪುರ, ಚಿಕ್ಕಬಳ್ಳಾಪುರ, ಕೊಪ್ಪಳ, ಗದಗ, ಧಾರವಾಡ, ಚಿತ್ರದುರ್ಗ ಜಿಲ್ಲೆಯಲ್ಲಿ ಸಮೀಕ್ಷೆ ಪೂರ್ಣಗೊಂಡಿದೆ. ಉಳಿದ ಜಿಲ್ಲೆಗಳಲ್ಲಿ ಸಮೀಕ್ಷೆ ಅಂತಿಮ ಹಂತದಲ್ಲಿದೆ. 60 ವರ್ಷ ಮೇಲ್ಪಟ್ಟವರು, ಶೀತ–ಜ್ವರದಿಂದ ಬಳಲುತ್ತಿರುವವರು, ಮಧುಮೇಹ ಸೇರಿದಂತೆ ವಿವಿಧ ಅನಾರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವವರು ಹಾಗೂ ಸೋಂಕು ಶಂಕಿತರನ್ನು ಗುರುತಿಸಿ, ಅವರನ್ನು ಅಪಾಯಕ್ಕೆ ತುತ್ತಾಗುವ ಪಟ್ಟಿಗೆ ಸೇರಿಸಲಾಗಿದೆ.

> **ಸಮೀಕ್ಷೆ ಬಹುತೇಕ ಅಂತ್ಯವಾಗಿದೆ. ಸೋಂಕು ಲಕ್ಷಣ ಇದ್ದವರಿಗೆ ಪರೀಕ್ಷೆ ಮಾಡಲಾಗುತ್ತಿದೆ. ವೃದ್ಧರು, ಅನಾರೋಗ್ಯಪೀಡಿತರ ಜತೆ ಸಂಪರ್ಕದಲ್ಲಿ ಇರಲಾಗುತ್ತದೆ**
>
> **ಡಾ. ಓಂಪ್ರಕಾಶ್ ಪಾಟೀಲ್**
> ಆರೋಗ್ಯ ಇಲಾಖೆ ನಿರ್ದೇಶಕ

ಬೆಂಗಳೂರಿನಲ್ಲಿ ಅತೀ ಹೆಚ್ಚು ಮಂದಿ (7.46 ಲಕ್ಷ) ಅಪಾಯದ ವರ್ಗದಲ್ಲಿದ್ದಾರೆ. ಮೈಸೂರು, ಬೆಳಗಾವಿ, ದಕ್ಷಿಣ ಕನ್ನಡ, ತುಮಕೂರು ಜಿಲ್ಲೆಗಳಲ್ಲಿ 3 ಲಕ್ಷಕ್ಕೂ ಅಧಿಕ ಮಂದಿ ಈ ವರ್ಗದಲ್ಲಿದ್ದಾರೆ. ಒಂದು ಲಕ್ಷಕ್ಕೂ ಅಧಿಕ ಮಂದಿ ಶೀತ, ಜ್ವರ ಹಾಗೂ ಕೆಮ್ಮಿನ ಸಮಸ್ಯೆ ಎದುರಿಸುತ್ತಿರುವುದು ಪತ್ತೆಯಾಗಿದೆ.

**ಸೋಂಕು ಲಕ್ಷಣ:** ಸಮೀಕ್ಷೆಯ ವೇಳೆ ಬೆಂಗಳೂರಿನ 3 ಸಾವಿರ ಸೇರಿದಂತೆ ರಾಜ್ಯದಲ್ಲಿ ಒಟ್ಟು 21 ಸಾವಿರಕ್ಕೂ ಅಧಿಕ ಮಂದಿ ಶೀತಜ್ವರ ಮಾದರಿಯ ಅನಾರೋಗ್ಯ ಸಮಸ್ಯೆಯಿಂದ (ಐಎಲ್‌ಐ) ಬಳಲುತ್ತಿರುವುದು ಪತ್ತೆಯಾಗಿದೆ. ಇದು ಕೋವಿಡ್ ಲಕ್ಷಣ ಆಗಿರುವುದರಿಂದ ಪರೀಕ್ಷೆಗೆ ಸೂಚಿಸಲಾಗಿದೆ. ಮಧುಮೇಹ, ಅಧಿಕ ರಕ್ತದೊತ್ತಡ ಸೇರಿದಂತೆ ವಿವಿಧ ಗಂಭೀರ ಅನಾರೋಗ್ಯ ಸಮಸ್ಯೆಯಿಂದ ಬಳಲುತ್ತಿರುವವರನ್ನೂ ಗುರುತಿಸಲಾಗಿದೆ.